**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 674(897) |
| 2. | ಸದಸ್ಯರ ಹೆಸರು | : | ಶ್ರೀ ದಿನೇಶ್ ಗೂಳೀಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 26.12.2022 |
| 4. | ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ವೈದ್ಯಕೀಯ ಪದವೀಧರರಲ್ಲದ ಬೋಧಕ ಸಿಬ್ಬಂದಿಯನು ಕರ್ತವ್ಯದಿಂದ ಬಿಡುಗಡೆಗೊಳಿಸಿ, ಸದರಿ ಜಾಗಕ್ಕೆ ಕಡ್ಡಾಯ ಗ್ರಾಮೀಣ ಸೇವೆ ನಿಮಿತ್ತ ಆರೋಗ್ಯ ಇಲಾಖೆಯಿಂದ ನಿಯೋಜನೆಗೊಂಡಿರುವ ವೈದ್ಯರುಗಳನ್ನು ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಕಡ್ಡಾಯ ಸರ್ಕಾರಿ ಸೇವೆಯ ಆಧಾರದ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸುವ ದೃಷ್ಠಿಯಿಂದ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ವೈದ್ಯಕೀಯ ಪದವೀಧರರಲ್ಲದ ಬೋಧಕ ಸಿಬ್ಬಂದಿಯನ್ನು ಕರ್ತವ್ಯದಿಂದ ಬಿಡುಗಡೆ ಮಾಡಲಾಗಿದೆ.<br><br>ರಾಷ್ಟ್ರೀಯ ವೈದ್ಯಕೀಯ ಆಯೋಗದ Teachers eligibility qualifications in Medical institutions Regulations, 2022 ಪ್ರಕಾರ ಶೇ.30 ರಷ್ಟು ವೈದ್ಯಕೀಯ ಪದವೀಧರರಲ್ಲದ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಬಹುದಾಗಿದ್ದು, ಅದು ಕಡ್ಡಾಯವಾಗಿರುವುದಿಲ್ಲ.<br><br>ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಎಂ.ಬಿ.ಬಿ.ಎಸ್ ವ್ಯಾಸಂಗ ಪೂರ್ಣಗೊಳಿಸಿದ ಅಭ್ಯರ್ಥಿಗಳನ್ನು ಸರ್ಕಾರಿ ಆಸ್ಪತ್ರೆ/ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಒಂದು ವರ್ಷ ಕಡ್ಡಾಯ ಸರ್ಕಾರಿ ಸೇವೆಗೆ ನಿಯುಕ್ತಿ ಮಾಡುವುದು ಸರ್ಕಾರದ ನೀತಿಯಾಗಿದ್ದು, ಯಾವುದೇ ನಿಯಮಾವಳಿಗೆ ವಿರುದ್ಧವಾಗಿರುವುದಿಲ್ಲ. |
| ಆ) | ಭಾರತೀಯ ವೈದ್ಯಕೀಯ ಮಂಡಳಿಯ ನಿಯಮಾವಳಿಯಂತೆ ಶೇ.30 ರಷ್ಟು ವೈದ್ಯಕೀಯ ಪದವೀಧರರಲ್ಲದ ಮೈಕ್ರೋ ಬಯೋಲಜಿ ಮತ್ತು ಬಯೋ ಕೆಮಿಸ್ಟ್ರಿ ಸಿಬ್ಬಂದಿಗಳನ್ನು ಘನ ಉಚ್ಛ ನ್ಯಾಯಲಯದ ಆದೇಶವಿದ್ದರೂ ಕರ್ತವ್ಯದಿಂದ ಬಿಡುಗಡೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಹಾಗಿದ್ದಲ್ಲಿ, ಸದರಿ ಹುದ್ದೆಗಳಿಗೆ ನಿಯಮಾವಳಿಗೆ ವಿರುದ್ಧವಾಗಿ ಕಡ್ಡಾಯ ಗ್ರಾಮೀಣ ಸೇವೆ ವೈದ್ಯರನ್ನು ನಿಯೋಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ) | ಕೋವಿಡ್-19ರ ನಿರ್ವಹಣೆಗೆ ನಿಮ್ಹಾನ್ಸ್ ನಿಂದ ತರಬೇತಿ ಹೊಂದಿದ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;? (ಅವರು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳಗಳ ವಿವರಗಳನ್ನು ನೀಡುವುದು) | ನಿಮ್ಹಾನ್ಸ್‌ನಿಂದ ತರಬೇತಿ ಪಡೆದ ಇಬ್ಬರು ವೈದ್ಯರು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪೆಥಾಲಜಿ ಮತ್ತು ಮೈಕ್ರೋ ಬಯೋಲಜಿ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |

..2

-2-

| | | |
|---|---|---|
| ಉ) | ತರಬೇತಿ ಹೊಂದಿದ ಸಿಬ್ಬಂದಿಗಳನ್ನು ಹೊರತುಪಡಿಸಿ ಮಂಡ್ಯ ವೈದ್ಯಕೀಯ ವಿಜ್ಞಾನ | ಇಂತಹ ಪ್ರಕರಣಗಳು ನಡೆದಿರುವುದಿಲ್ಲ. |

DFA/995584

| | | |
|---|---|---|
| | ಸಂಸ್ಥೆಯಲ್ಲಿ ಪ್ರಯೋಗಾಲಯಗಳಲ್ಲಿ ವೈದ್ಯಕೀಯೇತರ ಬೋಧಕ ಸಿಬ್ಬಂದಿಗಳ ಹುದ್ದೆಗೆ ಅನರ್ಹ ವ್ಯಕ್ತಿಗಳನ್ನು ನೇಮಿಸಿ ಪ್ರಯೋಗಾಲಯ ವರದಿಗಳನ್ನು ಅನಧಿಕೃತವಾಗಿ ವಿತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಊ) | ಹಾಗಿದ್ದಲಿ, ತರಬೇತಿ ಹೊಂದಿರುವ ವ್ಯಕ್ತಿಗಳನ್ನು ಪ್ರಯೋಗಾಲಯಕ್ಕೆ ನೇಮಿಸಿಕೊಳ್ಳಲು ಸರ್ಕಾರಕ್ಕಿರುವ ತೊಂದರೆಗಳೇನು; | |
| ಋ) | ಸರ್ಕಾರ ಈಗಲಾದರೂ ನುರಿತ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ನೇಮಕ ಮಾಡಕೊಳ್ಳಲಾಗುವುದು (ಸಂಪೂರ್ಣ ವಿವರ ನೀಡುವುದು); | ಮೇಲ್ಕಂಡ ಉತ್ತರದಿಂದಾಗಿ ಉದ್ಭವಿಸುವುದಿಲ್ಲ. |
| ಎ) | ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಕಡ್ಡಾಯ ಗ್ರಾಮೀಣ ಸೇವೆ ವೈದ್ಯರನ್ನು ಎರವಲು ಪಡೆಯಲು ನೀಡಿದ ಮಾಹಿತಿಯಲ್ಲಿ ಬೋಧಕೇತರ ಸಿಬ್ಬಂದಿಗಳ ಹುದ್ದೆಯನ್ನು ಖಾಲಿ ಎಂದು ನಮೂದಿಸಿ, ಹೆಚ್ಚುವರಿ ವೈದ್ಯರುಗಳನ್ನು ಸೇವೆಗೆ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಯಾವುದೇ ವಿಭಾಗದಲ್ಲಿ ಹೆಚ್ಚುವರಿ ವೈದ್ಯರುಗಳನ್ನು ಸೇವೆಗೆ ತೆಗೆದುಕೊಂಡಿರುವುದಿಲ್ಲ |

**ಸಂಖ್ಯೆ:** ಎಂಇಡಿ 551 ಎಂಪಿಎಸ್ 2022

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು.



Generated from eOffice by DR K SUDHAKAR, HFW-MIN(SK), HEALTH MINISTER, HEALTH AND FAMILY WELFARE SEC on 17/12/2022 06:05 PM